## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿಯಲ್ಲಿ ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ಕೊರತೆಯಿಂದ ಭರ್ತಿಯಾಗದೇ ಉಳಿದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸುವ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 8 ಸೇಹಿಮ 2015, ಬೆಂಗಳೂರು ದಿನಾಂಕ:03.10.2015**

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 19 ಎಸ್‌ಬಿಸಿ 89 ದಿನಾಂಕ 12.07.1989

2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995 ದಿನಾಂಕ 20.06.1995.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 6 ಸೇಹಿಮ 2014 ದಿನಾಂಕ 05.02.2015
4. 14 ನೇ ವಿಧಾನ ಸಭೆಯ ಎರಡನೇ ವರದಿಯಲ್ಲಿ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯು ಮಾಡಿರುವ ಶಿಫಾರಸ್ಸುಗಳು.

ಪ್ರಸ್ತಾವನೆ :

ಮೇಲೆ (1) ರಲ್ಲಿ ಓದಲಾದ ಆದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅವರಿಗಾಗಿ ಮೀಸಲಿರಿಸಿದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಲು ಆದೇಶಿಸಲಾಗಿದೆ.

ಮೇಲೆ (2) ರಲ್ಲಿ ಓದಲಾದ ದಿನಾಂಕ 20.6.1995 ರ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 8 ಸೇಹಿಮ 95 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಭಾರತ ಸಂವಿಧಾನದ ಅನುಚ್ಛೇದ16(4) ರ ಪ್ರಕಾರ ಇತರೆ ಹಿಂದುಳಿದ ವರ್ಗಗಳಿಗೆ ಅಳವಡಿಸಿಕೊಳ್ಳಬೇಕಾದ ಮೀಸಲಾತಿ ವಿಧಾನ ಮತ್ತು ಅದಕ್ಕಾಗಿ ಅನುಸರಿಸಬೇಕಾದ ರೋಸ್ಟರ್‌ನ್ನು ನಿಗದಿಪಡಿಸಲಾಗಿದೆ. ಈ ಆದೇಶದಲ್ಲಿ ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಗುರುತಿಸಲ್ಪಟ್ಟ ರಿಕ್ತ ಸ್ಥಾನಗಳಿಗೆ ಆಯಾ ವರ್ಗದ ಅರ್ಹ ಅಭ್ಯರ್ಥಿಗಳ ಲಭ್ಯತೆಯಲ್ಲಿನ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದೆಂದು ಮತ್ತು ಈ ರೀತಿ ನಷ್ಟಗೊಂಡ ರಿಕ್ತ ಸ್ಥಾನಗಳನ್ನು ಮುಂದಿನ ಮತ್ತು ತದನಂತರದ 2 ಕ್ಯಾಲೆಂಡರ್ ವರ್ಷಗಳಿಗೆ ಮುಂದಕ್ಕೆ ಕೊಂಡೊಯ್ಯತಕ್ಕದ್ದೆಂದು ಆದೇಶಿಸಲಾಗಿರುತ್ತದೆ.

ಮೇಲೆ (3) ರಲ್ಲಿ ಓದಲಾಗಿರುವ ಆದೇಶದಲ್ಲಿ ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಗುರುತಿಸಲ್ಪಟ್ಟ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳ ಲಭ್ಯತೆಯಲ್ಲಿನ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು "ಮೂರು ನೇಮಕಾತಿಯವರೆಗೆ ಅಥವಾ ಗರಿಷ್ಠ 5 ಕ್ಯಾಲೆಂಡರ್ ವರ್ಷಗಳವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ" ಮುಂದುವರೆಸಲು ಆದೇಶಿಸಲಾಗಿದೆ.

ಭಾರತ ಸಂವಿಧಾನದ ಅನುಚ್ಛೇದ 16(4ಬಿ) ಈ ಕೆಳಕಂಡಂತಿದೆ.

" (4B) Nothing in this article shall prevent the State from considering any unfilled vacancies of a year which are reserved for being filled up in that year in accordance with any provision for reservation made under clause (4) or clause (4A) as a separate class of vacancies to be filled up in any succeeding year or years and such class of vacancies shall not be considered together with vacancies of the year in which they are being filled up for determining the ceiling of fifty percent reservation on total number of vacancies of that year.".

ಮೇಲೆ (4) ರಲ್ಲಿ ಓದಲಾದ 14 ನೇ ವಿಧಾನ ಸಭೆಯ ಎರಡನೇ ವರದಿಯಲ್ಲಿ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳು ನೇಮಕಾತಿಯಲ್ಲಿ ಲಭ್ಯವಿಲ್ಲದಿದ್ದಾಗ ಅವರಿಗಾಗಿ ರಿಕ್ತ ಸ್ಥಾನಗಳನ್ನು ಮೀಸಲಾತಿಯಿಂದ ವಿಮುಕ್ತಿಗೊಳಿಸದ ಕಾಯ್ದಿರಿಸುವ ಬ್ಯಾಕ್‌ಲಾಗ್ ನೀತಿಯನ್ನು ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತ ವರ್ಗದ ಅಭ್ಯರ್ಥಿಗಳು ಅಲಭ್ಯರಾದ ಸಂದರ್ಭದಲ್ಲಿಯೂ ಅನ್ವಯಿಸಿ ಬ್ಯಾಕ್‌ಲಾಗ್ ನೀತಿಯನ್ನು ಜಾರಿಗೆ ತರಲು ಶಿಫಾರಸ್ಸು ಮಾಡಿರುತ್ತದೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 8 ಸೆಹಿಮ 1995 ದಿನಾಂಕ: 20.06.1995 ನ್ನು ಮಾರ್ಪಡಿಸಿ ಆದೇಶ ಭಾಗದಲ್ಲಿನ ಕಂಡಿಕೆ 7, 8 ಮತ್ತು 9 ಗಳ ಬದಲಿಗೆ ಈ ಕೆಳಕಂಡ ಕಂಡಿಕೆಗಳನ್ನು ಪ್ರತಿಸ್ಥಾಪಿಸಿ ಆದೇಶಿಸಿದೆ.

" 7. ಇತರೆ ಹಿಂದುಳಿದ ವರ್ಗಗಳಿಗೆ ಗುರುತಿಸಲ್ಪಟ್ಟ ಆದರೆ ಆಯಾ ಪ್ರವರ್ಗಗಳ ಅರ್ಹ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯತಕ್ಕದ್ದು. ಈ ರಿಕ್ತ ಸ್ಥಾನಗಳನ್ನು ಮೀಸಲಾತಿಯಿಂದ ವಿಮುಕ್ತಿಗೊಳಿಸುವಂತಿಲ್ಲ.

8. ಮುಂದಿನ ನೇರನೇಮಕಾತಿ ಸಂದರ್ಭದಲ್ಲಿ ಹೊಸ ರಿಕ್ತ ಸ್ಥಾನಗಳನ್ನು ಮತ್ತು ಬ್ಯಾಕ್‌ಲಾಗ್ ರಿಕ್ತ ಸ್ಥಾನಗಳ ಪಟ್ಟಿಯನ್ನು ಪ್ರತ್ಯೇಕವಾಗಿ ಪ್ರಕಟಿಸತಕ್ಕದ್ದು.

9. ಹೊಸ ರಿಕ್ತ ಸ್ಥಾನಗಳನ್ನು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ವರ್ಗೀಕರಣ ಮಾಡಿ ಪ್ರಕಟಿಸುವುದು. ಬ್ಯಾಕ್‌ಲಾಗ್ ರಿಕ್ತ ಸ್ಥಾನಗಳನ್ನು ಮತ್ತೊಮ್ಮೆ ವರ್ಗೀಕರಣ ಮಾಡುವಂತಿಲ್ಲ."

ದಿನಾಂಕ 05.02.2015 ರ ಆದೇಶದಲ್ಲಿ ತಿಳಿಸಿರುವಂತೆ ನೇರ ನೇಮಕಾತಿಯಲ್ಲಿ ಇತರೆ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳ ಕೊರತೆಯಿಂದ ಭರ್ತಿಮಾಡದೇ ಮುಂದಕ್ಕೆ ಕೊಂಡೊಯ್ಯಲಾದ ರಿಕ್ತ ಸ್ಥಾನಗಳಿಗೂ ಈ ಆದೇಶ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಮಂಗಳ ಜಿ.ಎಸ್) 3/10/15
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 1000 ಪ್ರತಿ ಸಿಆಸುಇ (ಸೇವಾ ನಿಯಮಗಳು-ಎ) ಕೊ.ಸಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋ

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು,
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
3. ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
6. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
7. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು-560 001
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
9. ಕಾರ್ಯದರ್ಶಿಯವರು, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು-560001.
10. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01
11. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು-560 001
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಇಂದಿರಾನಗರ, ಬೆಂಗಳೂರು-560 038.
13. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-560 001
14. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು